ಕರ್ನಾಟಕ ಸರ್ಕಾರ
(ವಾಣಿಜ್ಯ ತೆರಿಗೆ ಇಲಾಖೆ)

**ವಾಣಿಜ್ಯ ತೆರಿಗೆಗಳ ಆಯುಕ್ತರು, ಕರ್ನಾಟಕ, ಬೆಂಗಳೂರು ಇವರ ನಡಾವಳಿಗಳು – 1979ರ ಕರ್ನಾಟಕ ಪ್ರವೇಶ ತೆರಿಗೆ ಕಾಯ್ದೆಯ ಪ್ರಕರಣ 12(7) ರನ್ವಯ ಸ್ಪಷ್ಟೀಕರಣ**

ವಿಷಯ: ಕರ್ನಾಟಕ ಪ್ರವೇಶ ತೆರಿಗೆ ಕಾಯ್ದೆ 1979 – ಆಮದು ಮಾಡಿಕೊಂಡ 'ಬಸ್ ಚಾಸಿಸ್' ಮತ್ತು 'ಬಸ್ ಕವಚ ನಿರ್ಮಾಣ' ಕ್ಕೆ ಅನ್ವಯವಾಗುವ ಪ್ರವೇಶ ತೆರಿಗೆ ದರದ ಸ್ಪಷ್ಟೀಕರಣ ಕುರಿತು.

ಉಲ್ಲೇಖ: ಮೆ: ಕೆಎಂಎಸ್ ಬಸ್ ಮ್ಯಾನುಫ್ಯಾಕ್ಚರರ್ಸ್ ಪ್ರೈ.ಲಿ., ಬೆಂಗಳೂರು ಇವರ ಪತ್ರ ದಿನಾಂಕ 05-06-2014 – ಟಿನ್–29221137798.

* * *

ಅರ್ಜಿದಾರರಾದ ಮೆ: ಐ ಕೆಎಂಎಸ್ ಬಸ್ ಮ್ಯಾನುಫ್ಯಾಕ್ಚರರ್ಸ್ ಪ್ರೈ.ಲಿ., ನಂ.129/1ಬಿ1, ಇಂಡಸ್ಟ್ರಿಯಲ್ ಏರಿಯಾ, ಮೈಸೂರು ರಸ್ತೆ, ಕೆಂಗೇರಿ, ಬೆಂಗಳೂರು – 560 060 ಇವರು ಮೇಲ್ಕಂಡ ಅರ್ಜಿಯಲ್ಲಿ "ಬಸ್ ಚಾಸಿಸ್' ಮತ್ತು 'ಬಸ್ ಕವಚ ನಿರ್ಮಾಣ' ಕ್ಕೆ ಅನ್ವಯವಾಗುವ ಪ್ರವೇಶ ತೆರಿಗೆ ದರದ ಕುರಿತು ಸ್ಪಷ್ಟೀಕರಣವನ್ನು ಕೋರಿರುತ್ತಾರೆ.

2. 1979ರ ಕರ್ನಾಟಕ ಪ್ರವೇಶ ತೆರಿಗೆ ಕಾಯ್ದೆಯ ಪ್ರಕರಣ 12(7) ಮೇರೆಗೆ, ವಾಣಿಜ್ಯ ತೆರಿಗೆಗಳ ಆಯುಕ್ತರು, ತೆರಿಗೆಯ ನಿರ್ಧರಣೆ ಹಾಗೂ ರಾಜಸ್ವದ ಸಂಗ್ರಹಣೆ ಕಾರ್ಯದಲ್ಲಿ ಏಕರೂಪತೆಯನ್ನು ತರುವ ಉದ್ದೇಶಕ್ಕಾಗಿ, ಸದರಿ ಅಧಿನಿಯಮದಡಿಯಲ್ಲಿ ಸಂದಾಯ ಮಾಡತಕ್ಕ ತೆರಿಗೆ ದರವನ್ನು ಸ್ಪಷ್ಟಪಡಿಸುವುದು ಅವಶ್ಯವೆಂದು ಅಥವಾ ಯುಕ್ತವೆಂದು ಭಾವಿಸಿದರೆ ಹಾಗೆ ಮಾಡಲು ಅಧಿಕಾರ ಹೊಂದಿದ್ದಾರೆ. ಅರ್ಜಿದಾರರು ಕೋರಿರುವ ಸ್ಪಷ್ಟೀಕರಣವು ಮೇಲೆ ನಮೂದಿಸಿದ ಉಪಬಂಧದ ವ್ಯಾಪ್ತಿಗೊಳಪಡುವುದರಿಂದ ತೆರಿಗೆ ದರದ ಬಗ್ಗೆ ಸ್ಪಷ್ಟಪಡಿಸುವುದು ಸದರಿ ಉಪಬಂಧದ ಉದ್ದೇಶ ಸಾಧನೆಗಾಗಿ ಅವಶ್ಯವೆಂದು ಮನವರಿಕೆಯಾಗಿದೆ.

3. ಈ ಹಿನ್ನೆಲೆಯಲ್ಲಿ ತೆರಿಗೆ ದರವನ್ನು ಈ ಕೆಳಕಂಡಂತೆ ಸ್ಪಷ್ಟಪಡಿಸಲಾಗಿದೆ.

**ಸ್ಪಷ್ಟೀಕರಣ ಆದೇಶ ಸಂಖ್ಯೆ: ಕೆಟಿಇಜಿ/ಸಿಆರ್–06/2014–15, ದಿ:22–07–2014**

"ಮೋಟಾರ್ ವೆಹಿಕಲ್ ಚಾಸಿಸ್" ಸರಕು ಕರ್ನಾಟಕ ಪ್ರವೇಶ ತೆರಿಗೆ ಕಾಯ್ದೆ, 1979ರ ಅಡಿಯಲ್ಲಿ ಅನುಸೂಚಿತವಲ್ಲದ ಸರಕು ಆಗಿರುವುದರಿಂದ ಇದಕ್ಕೆ ಪ್ರವೇಶ ತೆರಿಗೆ ಬಾಧ್ಯತೆ ಇರುವುದಿಲ್ಲವೆಂದು ಸ್ಪಷ್ಟೀಕರಿಸಲಾಗಿದೆ.

(ಅಜಯ್ ಸೇಠ್)
ವಾಣಿಜ್ಯ ತೆರಿಗೆ ಆಯುಕ್ತರು,
ಕರ್ನಾಟಕ, ಬೆಂಗಳೂರು.

ವಾಣಿಜ್ಯ ತೆರಿಗೆಗಳ ಆಯುಕ್ತರು
ಕರ್ನಾಟಕ, ಬೆಂಗಳೂರು